# ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/02/ಇಎಸ್‌ಟಿ(9)/2018

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 14/12/2018.

## ಹಿಂಬರಹ

ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 42 ಹೆಚ್‌ಪಿಎ 2018 ದಿನಾಂಕ:16/11/2018ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್‌ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ ಕೆ.ಜಿ.ಎಫ್.ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ಈ ನಿರ್ದೇಶನಾಲಯದ ಕಟ್ಟಡ ವಿಭಾಗಕ್ಕೆ ಮಾಹಿತಿಗಾಗಿ
4. ನಿರ್ದೇಶಕರ ಆಪ್ತ ಶಾಖೆಗೆ
5. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

14675

## ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 42 ಹೆಚ್‌ಪಿಎ 2018

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ
ಬೆಂಗಳೂರು ದಿನಾಂಕ: 16.11.2018

## ಸುತ್ತೋಲೆ

ವಿಷಯ: ಸರ್ಕಾರಿ ಕಾರ್ಯಕ್ರಮಗಳಲ್ಲಿ ಸ್ಥಳೀಯ ಶಾಸಕರು ಅಧ್ಯಕ್ಷತೆ ವಹಿಸುವ ಬಗ್ಗೆ ಸ್ಪಷ್ಟೀಕರಣ ನೀಡುವ ಕುರಿತು.

ಉಲ್ಲೇಖ:
1. ಸುತ್ತೋಲೆ ಸಂಖ್ಯೆ:ಸಿಆಸುಇ:02 ಹೆಚ್‌ಡಬ್ಲೂಪಿ:2010,ದಿ:07.12.2010.
2. ಸುತ್ತೋಲೆ ಸಂಖ್ಯೆ:ಸಿಆಸುಇ:05 ಹೆಚ್‌ಡಬ್ಲೂಪಿ:2012,ದಿ:23.11.2012.
3. ಸುತ್ತೋಲೆ ಸಂಖ್ಯೆ:ಸಿಆಸುಇ:66 ಹೆಚ್‌ಡಬ್ಲೂಪಿ:2012,ದಿ:17.09.2012.
4. ಸುತ್ತೋಲೆ ಸಂಖ್ಯೆ:ಸಿಆಸುಇ:01 ರಾರಾಅ:2015,ದಿ:16.07.2015.

*****

1. ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಸುತ್ತೋಲೆಗಳಲ್ಲಿ ಸರ್ಕಾರದ ಯಾವುದೇ ಕಾರ್ಯಕ್ರಮವಿದ್ದಲ್ಲಿ ಆಯಾ ಕ್ಷೇತ್ರದ ಶಾಸಕರ ಅಧ್ಯಕ್ಷತೆಯಲ್ಲಿಯೇ ಕಾರ್ಯಕ್ರಮ ನಡೆಸಲು ತಿಳಿಸಲಾಗಿದೆ.

2. ಕೆಲವೊಂದು ಶಾಸಕರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯು ಎರಡು, ಮೂರು ತಾಲ್ಲೂಕುಗಳಿಗೆ ಸಂಬಂಧಿಸಿದ ಪೂರ್ಣ ಹಾಗೂ ಭಾಗಶಃ ಹೋಬಳಿಗಳನ್ನು ಒಳಗೊಂಡಿರುತ್ತವೆ ಮತ್ತು ಈ ಪೈಕಿ ಕೆಲವೊಂದು ಶಾಸಕರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಯಾವುದೇ ತಾಲ್ಲೂಕು ಕೇಂದ್ರಸ್ಥಾನಗಳು ಒಳಪಡುವುದಿಲ್ಲ. ಅಂತಹ ಶಾಸಕರಿಗೆ ತಮ್ಮ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದ ಸರ್ಕಾರಿ ಕಾರ್ಯಕ್ರಮಗಳನ್ನು ಮೂಲಭೂತ ಸೌಕರ್ಯಗಳ ಕೊರತೆ ಹಾಗೂ ಕ್ಷೇತ್ರದ ಜನತೆಗೆ ಸದರಿ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಆಗುವ ಅನಾನುಕೂಲಗಳ ದೃಷ್ಟಿಯಿಂದ ತಮ್ಮ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಆಯೋಜಿಸಲು ಕಷ್ಟಕರವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಅಂತಹ ಶಾಸಕರು ತಮ್ಮ ವಿಧಾನ ಸಭಾ ಕ್ಷೇತ್ರಕ್ಕೆ ಸಂಬಂಧಿಸಿದ ಸರ್ಕಾರಿ ಕಾರ್ಯಕ್ರಮಗಳನ್ನು ತಮ್ಮ ವಿಧಾನಸಭಾ ಕ್ಷೇತ್ರದ ಹೋಬಳಿ/ಪ್ರದೇಶ ಸೇರಿರುವ ತಾಲ್ಲೂಕಿನ ಕೇಂದ್ರಸ್ಥಾನದಲ್ಲಿ, ಅಂದರೆ ಸದರಿ ತಾಲ್ಲೂಕು ಕೇಂದ್ರ ಸ್ಥಾನ ಅವರ ವಿಧಾನಸಭಾ ಕ್ಷೇತ್ರಕ್ಕೆ ಸೇರದಿದ್ದಾಗಲೂ, ಅಲ್ಲಿ ಆಯೋಜಿಸುವುದು ಅವಶ್ಯಕವಾಗಿರುತ್ತದೆ. ಆದರೆ, ಮೇಲ್ಕಂಡ ಸುತ್ತೋಲೆಗಳ ಹಿನ್ನೆಲೆಯಲ್ಲಿ ಕಾರ್ಯಕ್ರಮ ನಡೆಯುವ ಸ್ಥಳದ ವ್ಯಾಪ್ತಿಯ ಶಾಸಕರು ಅಧ್ಯಕ್ಷತೆ ವಹಿಸಬೇಕಾಗಿರುವುದರಿಂದ ಆ ಕಾರ್ಯಕ್ರಮಕ್ಕೆ ಸಂಬಂಧಪಟ್ಟ ವಿಧಾನಸಭಾ ಕ್ಷೇತ್ರದ ಶಾಸಕರಿಗೆ ಅಧ್ಯಕ್ಷತೆ ವಹಿಸಲು ಸಾಧ್ಯವಾಗುತ್ತಿಲ್ಲ.

.....2

3. ಈ ಸಮಸ್ಯೆಯನ್ನು ಸರ್ಕಾರವು ಮನಗಂಡು ಸರ್ಕಾರಿ ಕಾರ್ಯಕ್ರಮಗಳಲ್ಲಿ ಸ್ಥಳೀಯ ಶಾಸಕರ ಅಧ್ಯಕ್ಷತೆ ವಹಿಸಬೇಕು ಎಂದು ಇರುವ ಅಂಶವನ್ನು ಈ ಕೆಳಗಿನಂತೆ ಮಾರ್ಪಡಿಸಿದೆ.

"ಸರ್ಕಾರದ ಯಾವುದೇ ಕಾರ್ಯಕ್ರಮವಿದ್ದಲ್ಲಿ ಸಾಮಾನ್ಯವಾಗಿ ಕಾರ್ಯಕ್ರಮ ನಡೆಯುವ ಸ್ಥಳದ ವ್ಯಾಪ್ತಿಗೆ ಒಳಪಡುವ ವಿಧಾನಸಭಾ ಕ್ಷೇತ್ರದ ಶಾಸಕರ ಅಧ್ಯಕ್ಷತೆಯಲ್ಲಿಯೇ ಕಾರ್ಯಕ್ರಮ ನಡೆಸುವುದು. ಆದರೆ, ಕೆಲವೊಂದು ಸಂದರ್ಭದಲ್ಲಿ ಒಂದು ವಿಧಾನಸಭಾ ಕ್ಷೇತ್ರದ ಸ್ಥಳೀಯ ಕಾರ್ಯಕ್ರಮವನ್ನು ಸದರಿ ವಿಧಾನಸಭಾ ಕ್ಷೇತ್ರದ ಹೋಬಳಿ/ಪ್ರದೇಶ ಸೇರಿರುವ ತಾಲ್ಲೂಕಿನ ಕೇಂದ್ರಸ್ಥಾನದಲ್ಲಿ ಏರ್ಪಡಿಸಿದ್ದು ಮತ್ತು ಸದರಿ ತಾಲ್ಲೂಕು ಕೇಂದ್ರಸ್ಥಾನವು ಇನ್ನೊಂದು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಇದ್ದರೆ, ಅಂತಹ ಕಾರ್ಯಕ್ರಮಗಳಲ್ಲಿ, ಕಾರ್ಯಕ್ರಮವು ಯಾವ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಪಟ್ಟಿರುತ್ತದೆಯೋ ಆ ಸಂಬಂಧಪಟ್ಟ ಶಾಸಕರು ಅಧ್ಯಕ್ಷತೆಯನ್ನು ವಹಿಸುವುದು ಎಂದು ಸೂಚಿಸಿದೆ."

(ಅಂಜುಂ ಪರ್ವೇಜ್.)
ಸರ್ಕಾರದ ಕಾರ್ಯದರ್ಶಿ, ಸಿ.ಆ.ಸುಇ

ಇವರಿಗೆ,

1. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು
2. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ, ವಿಧಾನಸೌಧ
3. ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತು, ವಿಧಾನಸೌಧ
4. ಎಲ್ಲಾ ಪ್ರಾದೇಶಿಕ ಆಯುಕ್ತರುಗಳು
5. ಎಲ್ಲಾ ಜಿಲ್ಲಾಧಿಕಾರಿಗಳು
6. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು
7. ಸರ್ಕಾರದ ಎಲ್ಲಾ ಇಲಾಖಾ ಮುಖ್ಯಸ್ಥರುಗಳು
8. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
9. ಎಲ್ಲಾ ಉಪ ವಿಭಾಗಾಧಿಕಾರಿಗಳು
10. ಎಲ್ಲಾ ಮಹಾನಗರ ಪಾಲಿಕೆಗಳ ಆಯುಕ್ತರು.
11. ಎಲ್ಲಾ ಪುರಸಭಾ ಆಯುಕ್ತರು.
12. ಎಲ್ಲಾ ಸಚಿವರ ಆಪ್ತ ಕಾರ್ಯದರ್ಶಿಗಳು
13. ಹೆಚ್ಚುವರಿ ಪ್ರತಿಗಳು/ಶಾಖಾ ರಕ್ಷಾ ಕಡತ.

ಮಾಹಿತಿಗಾಗಿ:

1. ಮಾನ್ಯ ಸಭಾಧ್ಯಕ್ಷರ ಆಪ್ತ ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ, ವಿಧಾನಸೌಧ
2. ಮಾನ್ಯ ಸಭಾಪತಿಯವರ ಆಪ್ತ ಕಾರ್ಯದರ್ಶಿ, ಕರ್ನಾಟಕ ವಿಧಾನ ಪರಿಷತ್ತು, ವಿಧಾನಸೌಧ
3. ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ.